ಕರ್ನಾಟಕ ವಿಧಾನ ಸಭೆ, ಸಂಶೋಧನಾ ಹಾಗೂ ಉಲ್ಲೇಖನಾ ಶಾಖೆ
KARNATAKA LEGISLATIVE ASSEMBLY, RESEARCH AND REFERENCE BRANCH

ಪತ್ರಿಕಾ ತುಣುಕುಗಳು
PAPER CLIPPINGS

15

ಇಲಾಖೆ / ವಿಷಯ : DEPARTMENT / SUBJECT: ಕೋವಿಡ್-19

ಪತ್ರಿಕೆಯ ಹೆಸರು : NAME OF THE NEWS PAPER: ಪ್ರಜಾವಾಣಿ ದಿನಾಂಕ : DATE : 20/11/20

### ರಾಜಕಾರಣಿಗಳಿಂದ ಕೋವಿಡ್ ಮಾರ್ಗಸೂಚಿ ಉಲ್ಲಂಘನೆ ಪ್ರಕರಣ

# ರಾಜಕೀಯ ಪಕ್ಷಗಳನ್ನೂ ಪ್ರತಿವಾದಿಗಳನ್ನಾಗಿಸುವ ಇಂಗಿತ

ಪ್ರಜಾವಾಣಿ ವಾರ್ತೆ

ಬೆಂಗಳೂರು: ಕೋವಿಡ್-19 ನಿಯಂತ್ರಣ ಮಾರ್ಗಸೂಚಿಗಳನ್ನು ಉಲ್ಲಂಘಿಸುವ ರಾಜಕಾರಣಿಗಳ ವಿರುದ್ಧ ಕ್ರಮ ಜರುಗಿಸುವುದಕ್ಕೆ ಸಂಬಂಧಿಸಿದ ಸಾರ್ವಜನಿಕ ಹಿತಾಸಕ್ತಿ ಅರ್ಜಿಯ ವಿಚಾರಣೆಯಲ್ಲಿ ವಿವಿಧ ರಾಜಕೀಯ ಪಕ್ಷಗಳನ್ನೂ ಪ್ರತಿವಾದಿಗಳನ್ನಾಗಿ ಮಾಡುವ ಇಂಗಿತವನ್ನು ಹೈಕೋರ್ಟ್ ಗುರುವಾರ ವ್ಯಕ್ತಪಡಿಸಿದೆ.



'ಮಾಸ್ಕ್ ಧರಿಸುವುದು, ಅಂತರ ಕಾಯ್ದುಕೊಳ್ಳುವುದು ಸೇರಿದಂತೆ ಕೋವಿಡ್ ಮಾರ್ಗಸೂಚಿ ಪಾಲಿಸದ ರಾಜಕೀಯ ಮುಖಂಡರ ವಿರುದ್ಧ ಕರ್ನಾಟಕ ಸಾಂಕ್ರಾಮಿಕ ರೋಗಗಳ ಕಾಯ್ದೆ-2020ರ ಅಡಿಯಲ್ಲಿ ಕ್ರಮ ಜರುಗಿಸಲು ರಾಜ್ಯ ಸರ್ಕಾರ ಬದ್ಧತೆ ತೋರುತ್ತಿಲ್ಲ. ಈ ಕಾರಣದಿಂದ ರಾಜಕೀಯ ಪಕ್ಷಗಳನ್ನೂ ಈ ಪ್ರಕರಣದಲ್ಲಿ ಪ್ರತಿವಾದಿಗಳನ್ನಾಗಿ ಮಾಡಲಾಗುವುದು' ಎಂದು ಮುಖ್ಯ ನ್ಯಾಯಮೂರ್ತಿ ಅಭಯ್ ಶ್ರೀನಿವಾಸ್ ಓಕಾ ನೇತೃತ್ವದ ವಿಭಾಗೀಯ ಪೀಠ ಹೇಳಿತು.

ರಾಜಕೀಯ ಮುಖಂಡರ ವಿರುದ್ಧ ಕ್ರಮ ಜರುಗಿಸಲು ಸರ್ಕಾರ ಸಿದ್ಧವಿದೆಯೆ? ಎಂಬುದರ ಕುರಿತು ಹೊಸದಾಗಿ ಪ್ರಮಾಣಪತ್ರ ಸಲ್ಲಿಸುವಂತೆ ನ್ಯಾಯಾಲಯ ಹಿಂದಿನ ವಿಚಾರಣೆ ವೇಳೆ ಸೂಚಿಸಿತ್ತು. ಆರೋಗ್ಯ ಇಲಾಖೆಯ ಹೆಚ್ಚುವರಿ ಮುಖ್ಯ ಕಾರ್ಯದರ್ಶಿ ಜಾವೇದ್ ಅಖ್ತರ್ ಗುರುವಾರ ಪ್ರಮಾಣಪತ್ರ ಸಲ್ಲಿಸಿದರು.

'ಕರ್ನಾಟಕ ಸಾಂಕ್ರಾಮಿಕ ರೋಗಗಳ ಕಾಯ್ದೆ-2020ಕ್ಕೆ ರಾಜ್ಯಪಾಲರು ಅಕ್ಟೋಬರ್ 16ರಂದು ಅಂಕಿತ ಹಾಕಿದ್ದಾರೆ. ಈ ಕಾಯ್ದೆಯ ಸೆಕ್ಷನ್ 5ರ ಪ್ರಕಾರ, ಮಾಸ್ಕ್ ಧರಿಸದೇ ಇರುವುದು ಮತ್ತು ಅಂತರ ಕಾಯ್ದುಕೊಳ್ಳದೇ ಇರುವವರಿಗೆ ಮೂರು ತಿಂಗಳಿನಿಂದ ಎರಡು ವರ್ಷಗಳವರೆಗೆ ಜೈಲು ಶಿಕ್ಷೆ ವಿಧಿಸಬಹುದು. ₹ 50,000ದಿಂದ ₹ 2 ಲಕ್ಷದವರೆಗೆ ದಂಡ ವಿಧಿಸುವುದಕ್ಕೂ ಅವಕಾಶವಿದೆ. ಆದರೆ, ಈ ಸೆಕ್ಷನ್ ಅಡಿಯಲ್ಲಿ ಜನರನ್ನು ಶಿಕ್ಷಿಸಲು ಸರ್ಕಾರ ಬಯಸಿಲ್ಲ. ಮಾರ್ಗಸೂಚಿ ಉಲ್ಲಂಘಿಸಿರುವವರಿಗೆ ದಂಡ ವಿಧಿಸುವುದಕ್ಕೆ ಸೀಮಿತವಾಗಿ ಕ್ರಮ ಕೈಗೊಳ್ಳಲಾಗುತ್ತಿದೆ' ಎಂದು ಪ್ರಮಾಣಪತ್ರದಲ್ಲಿ ತಿಳಿಸಿದರು.

ಕಾಯ್ದೆಯಲ್ಲಿ ಕೆಲವು ತಿದ್ದುಪಡಿಗಳನ್ನು ಮಾಡಲಾಗುವುದು. ಈಗ ಇರುವ ಸೆಕ್ಷನ್‌ಗಳನ್ನು ಬದಲಾವಣೆ ಮಾಡಿ ಸುಗ್ರೀವಾಜ್ಞೆ ಹೊರಡಿಸಲಾಗುವುದು ಎಂದು ಮಾಹಿತಿ ನೀಡಿದರು.

**ಪಟ್ಟಿ ಸಲ್ಲಿಸಲು ಸೂಚನೆ:** 'ಕೋವಿಡ್ ಮಾರ್ಗಸೂಚಿ ಉಲ್ಲಂಘನೆಯ ಹೆಚ್ಚಿನ ಪ್ರಕರಣಗಳು ರಾಜಕೀಯ ಪಕ್ಷಗಳ ಕಾರ್ಯಕ್ರಮಗಳಲ್ಲೇ ನಡೆಯುತ್ತಿವೆ. ಅರ್ಜಿದಾರರು ಮುಂದಿನ ವಿಚಾರಣೆ ವೇಳೆಗೆ ಮಾನ್ಯತೆ ಪಡೆದಿರುವ ರಾಜಕೀಯ ಪಕ್ಷಗಳ ಪಟ್ಟಿಯನ್ನು ಸಲ್ಲಿಸಬೇಕು. ಬಳಿಕ ರಾಜಕೀಯ ಪಕ್ಷಗಳಿಗೂ ನೋಟಿಸ್ ಜಾರಿ ಮಾಡಲಾಗುವುದು' ಎಂದು ಹೇಳಿದ ನ್ಯಾಯಪೀಠ, ರಾಜಕೀಯ ಪಕ್ಷಗಳನ್ನು ಪ್ರತಿವಾದಿಗಳನ್ನಾಗಿ ಮಾಡುವ ಕುರಿತು ನವೆಂಬರ್ 24ರಂದು ಆದೇಶ ನೀಡುವುದಾಗಿ ಪ್ರಕಟಿಸಿತು.

ಇದೇ ಅರ್ಜಿಯ ವಿಚಾರಣೆ ಸಂದರ್ಭದಲ್ಲಿ ಪ್ರಮಾಣಪತ್ರ ಸಲ್ಲಿಸಿದ್ದ ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ ಆಡಳಿತಾಧಿಕಾರಿ, ಕೋವಿಡ್-19 ಮಾರ್ಗಸೂಚಿ ಉಲ್ಲಂಘನೆ ಪ್ರಕರಣಗಳ ಪತ್ತೆಗೆ ನೇಮಿಸಿರುವ ಮಾರ್ಷಲ್‌ಗಳಿಗೆ ನೇರವಾಗಿ ಬ್ಯಾಂಕ್ ಖಾತೆಗೆ ವೇತನ ಪಾವತಿಗೆ ನಿರ್ದೇಶನ ನೀಡಿರುವುದನ್ನು ನ್ಯಾಯಾಲಯದ ಗಮನಕ್ಕೆ ತಂದರು.